# ಹಾಸನ ವಿಶ್ವವಿದ್ಯಾಲಯ

ಹೇಮಗಂಗೋತ್ರಿ ಹಾಸನ

# HASSAN UNIVERSITY

## HEMAGANGOTHRI HASSAN – 573226

ಕುಲಸಚಿವರ ಕಾರ್ಯಾಲಯ
Email:reg.hassan.uni@gmail.com
Office of the Registrar
Landline: 08172-220015

ನಂ/ಹಾ.ವಿ.ಹಾ/ಕು.ಸ.ಕಾ/319 /2023-24 ದಿನಾಂಕ: 13-09-2023

## ಸುತ್ತೋಲೆ

ವಿಷಯ:- 2023-24ನೇ ಶೈಕ್ಷಣಿಕ ಸಾಲಿನ ಪ್ರಥಮ ವರ್ಷದ ಸ್ನಾತಕ ಪದವಿಗಳಿಗೆ UUCMSನ ಮುಖಾಂತರ Onlineನಲ್ಲಿ ಪ್ರವೇಶಾತಿ ಮಾಡಿಕೊಳ್ಳಲು ಕೊನೆ ದಿನಾಂಕವನ್ನು ವಿಸ್ತರಿಸುವ ಬಗ್ಗೆ

ಉಲ್ಲೇಖ:-1.ಸರ್ಕಾರಿ ಆದೇಶ ಸಂ.ಇಡಿ 162 ಯುಎನ್ಇ 2023, ಬೆಂಗಳೂರು, ದಿನಾಂಕ:13-09-2023
2.ಇಡಿ 223ಡಿಸಿಇ 2023 (ಇ) ದಿನಾಂಕ: 13-09-2023

******

ಸರ್ಕಾರಿ ಉಲ್ಲೇಖದನ್ವಯ ದ್ವಿತೀಯ ಪಿ.ಯು.ಸಿ ಯ 2ನೇ ಪೂರಕ ಪರೀಕ್ಷೆಯಲ್ಲಿ ತೇರ್ಗಡೆಗೊಳ್ಳುವ ವಿದ್ಯಾರ್ಥಿಗಳಿಗೆ ಮಾತ್ರ ಫಲಿತಾಂಶದ ಆಧಾರದ ಮೇಲೆ **ಪದವಿ ತರಗತಿಗಳಿಗೆ ಪ್ರವೇಶಾತಿಯ ಕಾಲಮಿತಿಯನ್ನು ಯಾವುದೇ ದಂಡ ಶುಲ್ಕವಿಲ್ಲದೆ ದಿನಾಂಕ: 22-09-2023 ರವರೆಗೆ ವಿಸ್ತರಿಸಲಾಗಿದೆ.** ಸದರಿ ವಿದ್ಯಾರ್ಥಿಗಳಿಗೆ ಪೂರಕ ತರಗತಿಗಳನ್ನು Bridge Course ಮೂಲಕ ನಡೆಸಲು ಆದೇಶಿಸಲಾಗಿದೆ. ಈಗಾಗಲೇ ತಿಳಿಸಿರುವ ಶೈಕ್ಷಣಿಕ ವೇಳಾಪಟ್ಟಿಗೆ ಪೂರಕವಾಗಿ, ನಿಗದಿತ ಹಾಜರಾತಿಗೆ ಕೊರತೆಯಾಗದಂತೆ ಕ್ರಮವಹಿಸಿ ಜೊತೆಗೆ ದಿನಾಂಕ: 23-05-2023 ರ ಆದೇಶದನ್ವಯ ಪದವಿ ತರಗತಿಗಳಿಗೆ ಪ್ರವೇಶಾತಿ ಪಡೆದ ವಿದ್ಯಾರ್ಥಿಗಳಿಗೆ ದೊರೆತಿರುವ ಎಲ್ಲಾ ಶೈಕ್ಷಣಿಕ ಸೌಲಭ್ಯಗಳನ್ನು, ದ್ವಿತೀಯ ಪಿ.ಯು.ಸಿಯ 2ನೇ ಪೂರಕ ಪರೀಕ್ಷೆಯಲ್ಲಿ ತೇರ್ಗಡೆಗೊಂಡು ಪದವಿಗೆ ಪ್ರವೇಶಾತಿ ಪಡೆದ ವಿದ್ಯಾರ್ಥಿಗಳಿಗೂ ಸಹ ಕಲ್ಪಿಸಲು ಸೂಚಿಸಲಾಗಿದೆ.

**ಸೂಚನೆ**:- 2ನೇ ಪೂರಕ ಪರೀಕ್ಷೆಯ ವಿದ್ಯಾರ್ಥಿಗಳಲ್ಲದವರಿಗೆ **1,000/- (ಒಂದು ಸಾವಿರ) ದಂಡ ಶುಲ್ಕದೊಂದಿಗೆ** ಪ್ರವೇಶ ನೀಡುವುದು.

13/9/23

ಕುಲಸಚಿವರು

ಕುಲಸಚಿವರು
ಹಾಸನ ವಿಶ್ವವಿದ್ಯಾಲಯ
ಹೇಮಗಂಗೋತ್ರಿ
ಹಾಸನ-573 226

**ಇವರಿಗೆ:**

1. ಹಾಸನ ವಿಶ್ವವಿದ್ಯಾಲಯದ ವ್ಯಾಪ್ತಿಗೆ ಬರುವ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳಿಗೆ, ಹಾಸನ ಜಿಲ್ಲೆ, ಹಾಸನ

**ಪ್ರತಿ,**

1. ಮಾನ್ಯ ಕುಲಪತಿಗಳ/ಕುಲಸಚಿವರ ಆಪ್ತ ಸಹಾಯಕರು, ಹಾಸನ ವಿಶ್ವವಿದ್ಯಾಲಯ, ಹಾಸನ
2. ಕಛೇರಿ ಪ್ರತಿ

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ದ್ವಿತೀಯ ಪಿ.ಯು.ಸಿ. ಯ 2ನೇ ಪೂರಕ ಪರೀಕ್ಷೆಯಲ್ಲಿ ತೇರ್ಗಡೆಯಾಗುವ ವಿದ್ಯಾರ್ಥಿಗಳಿಗೆ ಪದವಿ ಪ್ರವೇಶಕ್ಕೆ ಅವಕಾಶ ಕಲ್ಪಿಸುವ ಕುರಿತು.

ಓದಲಾಗಿದೆ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಇವರ ಪ್ರಸ್ತಾವನೆ ದಿನಾಂಕ:17.08.2023.
2. ಸರ್ಕಾರದ ಆದೇಶ ಸಂಖ್ಯೆ: ಇಡಿ 80 ಯುಎನ್‌ಇ 2023, ದಿನಾಂಕ:23.05.2023.

**ಪ್ರಸ್ತಾವನೆ:-**

ಮೇಲೆ ಓದಲಾದ (1)ರ ಅ.ಸ. ಪತ್ರದಲ್ಲಿ 2023 ರ ದ್ವಿತೀಯ ಪಿಯುಸಿ 2ನೇ ಪೂರಕ ಪರೀಕ್ಷೆಯನ್ನು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ ವತಿಯಿಂದ ದಿನಾಂಕ: 21.08.2023 ರಿಂದ 02.09.2023 ರವರೆಗೆ ನಡೆಸಲಾಗುತ್ತಿದೆ. ಈ ಪರೀಕ್ಷೆಗೆ ಒಟ್ಟು 1,20,987 ವಿದ್ಯಾರ್ಥಿಗಳು ನೊಂದಾಯಿಸಿಕೊಂಡಿದ್ದು, ಇದರಲ್ಲಿ 2023ರ ಪರೀಕ್ಷೆಯಲ್ಲಿ ಅನುತ್ತೀರ್ಣಗೊಂಡಿರುವ 95,822 ವಿದ್ಯಾರ್ಥಿಗಳು ಹಾಗೂ ಇದಕ್ಕೂ ಪೂರ್ವದಲ್ಲಿ ಅನುತ್ತೀರ್ಣಗೊಂಡಿರುವ 25,165 ವಿದ್ಯಾರ್ಥಿಗಳಿರುತ್ತಾರೆ. 2023 ರ ದ್ವಿತೀಯ ಪಿಯುಸಿ 2ನೇ ಪೂರಕ ಪರೀಕ್ಷೆಗೆ ಹಾಜರಾಗಿ, ತೇರ್ಗಡೆಗೊಳ್ಳುವ ವಿದ್ಯಾರ್ಥಿಗಳಿಗೆ ದಾಖಲಾತಿ ಕಲ್ಪಿಸುವುದರಿಂದ ಸದರಿ ವಿದ್ಯಾರ್ಥಿಗಳು ಉನ್ನತ ವ್ಯಾಸಂಗ ಪಡೆಯಲು ಅನುಕೂಲವಾಗುತ್ತದೆ ಹಾಗೂ ಉನ್ನತ ಶಿಕ್ಷಣ ಇಲಾಖೆಯಲ್ಲಿ ಒಟ್ಟು ದಾಖಲಾತಿ ಕೂಡ ಹೆಚ್ಚಳ ಆಗುತ್ತದೆ. ಆದ್ದರಿಂದ ದ್ವಿತೀಯ ಪಿಯುಸಿ 2ನೇ ಪೂರಕ ಪರೀಕ್ಷೆಯಲ್ಲಿ ತೇರ್ಗಡೆಯಾಗುವ ವಿದ್ಯಾರ್ಥಿಗಳಿಗೆ ಉನ್ನತ ವ್ಯಾಸಂಗಕ್ಕೆ ದಾಖಲಾತಿ ಕಲ್ಪಿಸಲು ಸೂಕ್ತ ಆದೇಶ ಹೊರಡಿಸಲು ಕೋರಿರುತ್ತಾರೆ.

ಮೇಲೆ ಓದಲಾದ (2)ರ ದಿನಾಂಕ: 23.05.2023ರ ಆದೇಶದಲ್ಲಿ 2023-24ನೇ ಶೈಕ್ಷಣಿಕ ಸಾಲಿಗೆ ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ವಿಶ್ವವಿದ್ಯಾಲಯಗಳು/ಕಾಲೇಜು ಶಿಕ್ಷಣ/ಅನುದಾನ/ಅನುದಾನ ರಹಿತ ಕಾಲೇಜುಗಳ ಪದವಿ ತರಗತಿಗಳಿಗೆ ಸಂಬಂಧಿಸಿದಂತೆ (ತಾಂತ್ರಿಕ ಶಿಕ್ಷಣವನ್ನು ಹೊರತುಪಡಿಸಿ) ಶೈಕ್ಷಣಿಕ ವೇಳಾ ಪಟ್ಟಿಯನ್ನು ಹೊರಡಿಸಿ, ಆದೇಶಿಸಲಾಗಿರುತ್ತದೆ.

ಮೇಲ್ಕಂಡ ಅಂಶಗಳನ್ವಯ ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಇವರು ದಿನಾಂಕ: 07.09.2023ರಂದು ನೀಡಿರುವ ಅಭಿಪ್ರಾಯದನುಸಾರ ಪಿಯುಸಿ ವಿದ್ಯಾರ್ಥಿಗಳ 2ನೇ ಪೂರಕ ಪರೀಕ್ಷೆಯ ಮರುಮೌಲ್ಯಮಾಪನ ಫಲಿತಾಂಶ ಪ್ರಕಟವಾದ ನಂತರ (30.09.2023) ಸದರಿ ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪದವಿ ತರಗತಿಗಳಿಗೆ ಪ್ರವೇಶ ಅವಕಾಶ ಕಲ್ಪಿಸಬೇಕಾದರೆ ಶೈಕ್ಷಣಿಕ ವೇಳಾಪಟ್ಟಿಯನ್ನು ಮುಂದೂಡಬೇಕಾಗುತ್ತದೆ. ಈ ರೀತಿಯ ವೇಳಾಪಟ್ಟಿಯನ್ನು ಮುಂದೂಡುವುದು ಸೂಕ್ತವಲ್ಲವೆಂದು ಪರಿಗಣಿಸಿ ಆಯುಕ್ತರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಇವರ ಅಭಿಪ್ರಾಯದನ್ವಯ ಪೂರಕ ತರಗತಿಗಳನ್ನು (Bridge Course) ನಡೆಸಿ, ದ್ವಿತೀಯ ಪಿಯುಸಿ 2ನೇ ಪೂರಕ ಪರೀಕ್ಷೆ ಫಲಿತಾಂಶದ ಆಧಾರದ ಮೇಲೆ ಪದವಿ ತರಗತಿಗಳಿಗೆ ಪ್ರವೇಶ ನೀಡುವಂತೆ ತೀರ್ಮಾನಿಸಿ, ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರಿ ಆದೇಶ ಸಂ. ಇಡಿ 162 ಯುಎನ್‌ಇ 2023, ಬೆಂಗಳೂರು, ದಿನಾಂಕ: 13.09.2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ವಿಶ್ವವಿದ್ಯಾಲಯಗಳು/ಕಾಲೇಜು ಶಿಕ್ಷಣ/ಅನುದಾನ/ಅನುದಾನ ರಹಿತ ಕಾಲೇಜುಗಳು (ತಾಂತ್ರಿಕ ಶಿಕ್ಷಣವನ್ನು ಹೊರತುಪಡಿಸಿ) ದ್ವಿತೀಯ ಪಿ.ಯು.ಸಿಯ 2ನೇ ಪೂರಕ ಪರೀಕ್ಷೆಯಲ್ಲಿ ತೇರ್ಗಡೆಗೊಳ್ಳುವ ವಿದ್ಯಾರ್ಥಿಗಳಿಗೆ ಫಲಿತಾಂಶದ ಆಧಾರದ ಮೇಲೆ ಪದವಿ ತರಗತಿಗಳಿಗೆ ಪ್ರವೇಶಾತಿಯ ಕಾಲಮಿತಿಯನ್ನು ದಿನಾಂಕ: 13.09.2023 ರಿಂದ 10 ದಿನಗಳ ಕಾಲಮಿತಿಯೊಳಗೆ ಪ್ರವೇಶಾತಿ ನೀಡಲು, ಹಾಗೂ ಸದರಿ ವಿದ್ಯಾರ್ಥಿಗಳಿಗೆ ಪೂರಕ ತರಗತಿಗಳನ್ನು Bridge Course ಮೂಲಕ ನಡೆಸಲು ಆದೇಶಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಇಡಿ 80 ಯುಎನ್‌ಇ 2023, ದಿನಾಂಕ: 23.05.2023 ರ ಆದೇಶದನ್ವಯ ಪದವಿ ತರಗತಿಗೆ ಪ್ರವೇಶಾತಿ ಪಡೆದ ವಿದ್ಯಾರ್ಥಿಗಳಿಗೆ ದೊರಕಿರುವ ಎಲ್ಲಾ ಶೈಕ್ಷಣಿಕ ಸೌಲಭ್ಯಗಳನ್ನು, ದ್ವಿತೀಯ ಪಿ.ಯು.ಸಿಯ 2ನೇ ಪೂರಕ ಪರೀಕ್ಷೆಯಲ್ಲಿ ತೇರ್ಗಡೆಗೊಂಡು ಪದವಿಗೆ ಪ್ರವೇಶಾತಿ ಪಡೆದ ವಿದ್ಯಾರ್ಥಿಗಳಿಗೂ ಸಹ ಕಲ್ಪಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಶೀತಲ್ ಎಂ. ಹಿರೇಮಠ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-1).

**ಇವರಿಗೆ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.



Scanned with CamScanner

2. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು-560 001.
3. ಆಯುಕ್ತರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಕುಲಪತಿಗಳು, ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸಾರ್ವಜನಿಕ ವಿಶ್ವವಿದ್ಯಾಲಯಗಳು, ಕರ್ನಾಟಕ.
5. ಕುಲಸಚಿವರು, ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸಾರ್ವಜನಿಕ ವಿಶ್ವವಿದ್ಯಾಲಯಗಳು.
6. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
7. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಗಾಂಧಿನಗರ, ಬೆಂಗಳೂರು.

**ಪ್ರತಿ:**

1. ಮಾನ್ಯ ಮುಖ್ಯ ಮಂತ್ರಿಗಳ ಆಪ್ತ ಕಾರ್ಯದರ್ಶಿ, ವಿಧಾನ ಸೌಧ,, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳು ಮತ್ತು ಕಲ್ಯಾಣ ಇಲಾಖೆ, ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು.
4. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು.
5. ಮಾನ್ಯ ರಾಜ್ಯಪಾಲರ ಆಪ್ತ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
6. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಸರ್ಕಾರದ ಜಂಟಿ/ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಉನ್ನತ ಶಿಕ್ಷಣ ಇಲಾಖೆ(ಕಾಲೇಜು)/(ತಾಂತ್ರಿಕ ಮತ್ತು ಯೋಜನ ಶಾಖೆ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
10. ಇ-ಸಮನ್ವಯಾಧಿಕಾರಿ, ಉನ್ನತ ಶಿಕ್ಷಣ ಇಲಾಖೆ, ಇವರಿಗೆ (ಉನ್ನತ ಶಿಕ್ಷಣ ಇಲಾಖೆ ಜಾಲತಾಣದಲ್ಲಿ ಪ್ರಕಟಿಸಲು) – *UUCMS ತಂತ್ರಾಂಶದಲ್ಲಿ ದ್ವಿತೀಯ ಪಿ.ಯು.ಸಿಯ 2ನೇ ಪೂರಕ ಪರೀಕ್ಷೆಯಲ್ಲಿ ತೇರ್ಗಡೆಗೊಂಡು ಪದವಿಗೆ ಪ್ರವೇಶಾತಿ ಪಡೆದ ವಿದ್ಯಾರ್ಥಿಗಳಿಗೆ ಪ್ರವೇಶಾತಿಯನ್ನು ಒಳಗೊಂಡಂತೆ ಎಲ್ಲಾ ಶೈಕ್ಷಣಿಕ ಸೌಲಭ್ಯಗಳನ್ನು ಪಡೆಯಲು ಅನುವು ಮಾಡುವುದು.*
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

Scanned with CamScanner